KARNATAKA SUCCESS NO 1
Kannada Daily
ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.
Volume: 02 Issue-106
ಶನಿವಾರ 22 ಫೆಬ್ರವರಿ 2025
Price: 2.00 Rs. Pages - 2
RNI: KARKAN/2023/88508

# ಕರ್ನಾಟಕ ಸಕ್ಸಸ್ ನಂ 1

ಕನ್ನಡ ದಿನಪತ್ರಿಕೆ

ನಮ್ಮ ಸಂಪರ್ಕ: ಇ-ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508



ತಿಪಟೂರು ನಗರದ ತಾಲ್ಲೂಕು ಆಡಳಿತ ಸೌಧದಲ್ಲಿ ಸಂತ ಕವಿ ಸರ್ವಜ್ಞ ಜಯಂತಿಯನ್ನು ಆಚರಣೆ ಮಾಡಲಾಯಿತು, ಈ ಸಂದರ್ಭದಲ್ಲಿ ತಹಶೀಲ್ದಾರ್ ಪವನ್‌ಕುಮಾರ್, ಗ್ರೇಡ್ 2 ತಹಶೀಲ್ದಾರ್ ಜಗನ್ನಾಥ್, ಶಿರೆಸ್ತದಾರ್ ರವಿಕುಮಾರ್, ಸಿಬ್ಬಂದಿಗಳಾದ ಆಶೋಕ್, ಪುನೀತ್‌ಕುಮಾರ್, ಕುಂಬಾರ ಸಮಾಜದ ಅದ್ಯಕ್ಷ ಗೋವಿಂದರಾಜು, ಕಾರ್ಯದರ್ಶಿ ಸೋಮಶೇಖರ್, ಚಂದ್ರಶೇಖರ್ ಮತ್ತಿತ್ತರು ಹಾಜರಿದ್ದರು.

## ತಂಬಾಕುಮುಕ್ತ ಯವ ಅಭಿಯಾನ2.0ದಡಿ ಶಾಲಾ ವಿದ್ಯಾರ್ಥಿಗಳಿಗೆ ಕಾನೂನು ಅರಿವು



ಚಿಕ್ಕನಾಯಕನಹಳ್ಳಿ: ತಂಬಾಕುಮುಕ್ತ ಯವ ಅಭಿಯಾನ2.0ದಡಿ ಶಾಲಾ ವಿದ್ಯಾರ್ಥಿಗಳಿಗೆ ಕಾನೂನು ಅರಿವು ಹಾಗೂ ಸ್ಪರ್ಧಾ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಜಿಲ್ಲಾ ಹಾಗೂ ತಾಲ್ಲೂಕು ತಂಬಾಕು ನಿಯಂತ್ರಣ ಕೋಶದವತಿಯಿಂದ ಪಟ್ಟಣದ ನಿರ್ವಾಣೇಶ್ವರಸ್ವಾಮಿ ಬಾಲಕಿಯರ ಪ್ರೌಢಶಾಲೆ ಹಾಗೂ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ತಂಬಾಕು ಉತ್ಪನ್ನಗಳ ಬಳಕೆಯಿಂದ ಆಗುವ ದುಷ್ಪರಿಣಾಮಗಳ ಕುರಿತು ಉಪನ್ಯಾಸ ಹಾಗೂ ಕಾನೂನು ಅರಿವು ಕಾರ್ಯಕ್ರಮವನ್ನು ನಡೆಸಲಾಯಿತು.

ನಂತರ ಶಾಲೆಯಲ್ಲಿನ ವಿದ್ಯಾರ್ಥಿಗಳಿಗೆ ತಂಬಾಕು ಉತ್ಪನ್ನಗಳ ಬಳಕೆಯಿಂದಾಗುವ ಆರೋಗ್ಯದ ಸಮಸ್ಯೆ ಹಾಗೂ ಪರಿಸರದ ಮೇಲಾಗುವ ಪರಿಣಾಮಗಳ ಕುರಿತು ನಡೆಸಿದ ರಸಪ್ರಶ್ನೆ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ಹಾಗೂ ಪ್ರಶಸ್ತಿಪತ್ರ ಮತ್ತು ನಾಮಫಲಕಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ತಂಬಾಕು ನಿಯಂತ್ರಣ ಕೋಶದ ಮುಖ್ಯಸ್ಥರಾದ ಹರೀಶ್, ಆರೋಗ್ಯ ಶಿಕ್ಷಣಾಧಿಕಾರಿ ಸಿ.ವಿ. ವೆಂಕಟರಾಮಯ್ಯ, ಮುಖ್ಯೋಪಾಧ್ಯಾಯರು ಹಾಗು ಶಿಕ್ಷಕವರ್ಗ ಇದ್ದರು.

## ಒಂದು ವಾರದಲ್ಲಿ ಗೃಹಲಕ್ಷ್ಮೀ ಹಣ ಖಾತೆಗೆ ಹಾಕ್ತೀವೆ- ಲಕ್ಷ್ಮೀ ಹೆಬ್ಬಾಳ್ಕರ್

ಬೆಂಗಳೂರು : ಇನ್ನೊಂದು ವಾರದಲ್ಲಿ ಗೃಹಲಕ್ಷ್ಮೀ ಯೋಜನೆ ಯ ಫಲಾನುಭವಿಗಳ ಖಾತೆಗೆ ಹಣ ಸಂದಾಯವಾಗಲಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಖಾತರಿಪಡಿಸಿದರು.

ಗೃಹ ಕಚೇರಿಯಲ್ಲಿ ಮಾತ ನಾಡಿದ ಅವರು, ತಾಲೂಕು ಪಂಚಾಯಿತಿ ಮುಖಾಂತರ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಹಣ ಬಿಡುಗಡೆ ಮಾಡಲಾಗುವುದು.

ರಸ್ತೆ ಅಪಘಾತದಿಂದಾಗಿ ವಿಶ್ರಾಂತಿಯಲ್ಲಿದ್ದುದರಿಂದಾಗಿ ಹಣ ಸಂದಾಯವಾಗಲು ಸ್ವಲ್ಪ ವಿಳಂಬ ಆಯಿತು. ಈಗಾಗಲೇ ಅಧಿಕಾರಿಗಳಿಗೆ ಆದೇಶ ನೀಡಿದ್ದು, ಶೀಘ್ರದಲ್ಲೇ ಹಣ ಸಂದಾಯವಾಗಲಿದೆ ಎಂದು ಹೇಳಿದರು.

ಇದುವರೆಗೆ ಬೆಂಗಳೂರಿನ ಕೇಂದ್ರ ಕಚೇರಿ ಮೂಲಕ ಹಣ ಬಿಡುಗಡೆ ಮಾಡಲಾಗುತ್ತಿತ್ತು. ಇದನ್ನು ವಿಕೇಂದ್ರೀಕರಣ ಮಾಡುವ ನಿಟ್ಟಿನಲ್ಲಿ ತಾಲೂಕು ಪಂಚಾಯಿತಿ ಮೂಲಕ ಹಣ ಬಿಡುಗಡೆ ಮಾಡಿ, ನಂತರ ನಮ್ಮ ಇಲಾಖೆಯ ಶಿಶು ಯೋಜನಾಭಿವೃದ್ಧಿ ಅಧಿಕಾರಿಗಳ (ಸಿಡಿಪಿಓ) ಖಾತೆಗೆ ಹಣವನ್ನು ವರ್ಗಾವಣೆ ಮಾಡಲಾಗುತ್ತದೆ. ಇನ್ನೊಂದು ವಾರದಲ್ಲಿ ಹಣ ಬಿಡುಗಡೆ ಮಾಡುವಂತೆ ಸೂಚಿಸಿದ್ದೇನೆ ಎಂದರು.

ವಿರೋಧ ಪಕ್ಷದವರಿಗೆ ಮಾತನಾಡುವುದನ್ನು ಬಿಟ್ಟರೆ ಬೇರೇನೂ ಬರುವುದಿಲ್ಲ. ಗ್ಯಾರಂಟಿ ಯೋಜನೆಗಳಿಂದ ಸರ್ಕಾರ ದಿವಾಳಿಯಾಗುತ್ತದೆ ಎಂದು ಹೇಳಿಕೊಂಡು ನಮ್ಮ ಯೋಜನೆಗಳನ್ನೇ ಕಾಪಿ ಮಾಡಿಕೊಂಡು ಬಿಜೆಪಿಯವರು ಬೇರೆ ರಾಜ್ಯಗಳಲ್ಲಿ ಅಧಿಕಾರಕ್ಕೆ ಬಂದರು ಎಂದು ಕುಟುಕಿದರು.

## ಪೌರಕಾರ್ಮಿಕ ಸಾವು: 50 ಲಕ್ಷ ರೂ. ಪರಿಹಾರಕ್ಕೆ ಸಿಐಟಿಯು ಒತ್ತಾಯ



ಪಾವಗಡ ಪಟ್ಟದ ಶ್ರೀ ಶನಿಮಹಾತ್ಮ ದೇವಸ್ಥಾನದ ಬಳಿ ಟ್ರಾಕ್ಟರ್ ಹರಿದು ಪೌರಕಾರ್ಮಿಕ ಮಂಜುನಾಥ್ ಸಾವನ್ನಪ್ಪಿದ್ದು ಮೃತರ ಕುಟುಂಬಕ್ಕೆ 50 ಲಕ್ಷ ರೂಗಳ ಪರಿಹಾರ ನೀಡಬೇಕು ಎಂದು ಕರ್ನಾಟಕ ರಾಜ್ಯ ಮುನಿಸಿಪಲ್ ಕಾರ್ಮಿಕರ ಸಂಘ ಸಿಐಟಿಯು ನ ಕಾರ್ಯದರ್ಶಿ ಎನ್.ಕೆ. ಸುಬ್ರಮಣ್ಯ ಆಗ್ರಹಿಸಿದರು.

ಅವರು ಟೌನ್‌ಹಾಲ್ ಬಳಿ ಪೌರಕಾರ್ಮಿಕ ಮಂಜುನಾಥ್ ಕುಂಟುಬಕ್ಕೆ 50 ಲಕ್ಷ ಪರಿಹಾರ ನೀಡಬೇಕು ಮತ್ತು ಬದಲಿ ಉದ್ಯೋಗವನ್ನು ನೀಡಬೇಕು ಎಂದು ಆಗ್ರಹಿಸಿ ನಡೆಸಿದ ಪ್ರತಿಭಟನೆಯಲ್ಲಿ ಮಾತನಾಡಿದರು.

ಪೌರ ಕಾರ್ಮಿಕ ಮಂಜುನಾಥ್ ಎಂದಿನಂತೆ ತನ್ನ ಕೆಲಸವನ್ನು ಮುಗಿಸಿ ಮನೆಗೆ ತೆರಳಿದ್ದರೂ ಸಹ ಬೇರೆ ಕೆಲಸಕ್ಕೆ ನಿಯೋಜನೆ ಮಾಡಲಾಗಿದ್ದ ಮಂಜುನಾಥ್‌ನ ಟ್ರಾಕ್ಟರ್‌ನಿಂದ ಬಿದ್ದು ತಲೆಯ ಮೇಲೆ ಖಾಸಗಿ ಟ್ರಾಕ್ಟರ್ ಹರಿದು ತೀವ್ರತರವಾಗಿ ಗಾಯಗೊಂಡಿದ್ದ ಮಂಜುನಾಥ್‌ನನ್ನು ಹೆಚ್ಚಿನ ಚಿಕಿತ್ಸೆಗಾಗಿ ತುಮಕೂರಿನ ಜಿಲ್ಲಾಸ್ಪತ್ರೆಗೆ ಸಾಗಿಸುವ ಮಾರ್ಗ ಮಧ್ಯೆ ಸಾವನ್ನಪಿದ್ದು ಕೆಲಸ ಮುಗಿದ ನಂತರವೂ ಕೆಲಸಕ್ಕೆ ನಿಯೋಜಿಸಿದ್ದ ಅಧಿಖಾರಿಗಳ ವಿರುದ್ಧ ಸೂಕ್ತ ಕಾನೂನುಕ್ರಮ ಕೈಗೊಳ್ಳಬೇಕು ಎಂದು ಎನ್.ಕೆ.ಸುಬ್ರಮಣ್ಯ ಆಗ್ರಹಿಸಿದ್ದಾರೆ.

ಪೌರಕಾರ್ಮಿಕರನ್ನು ನಗರದ ಸ್ವಚ್ಛತೆಗೆಯ ಜೊತೆಗೆ ಚುನಾವಣಾ ಕೆಲಸ, ಜಾತ್ರೆ, ಉರುಸ್ ಸೇರಿದಂತೆ ವಿವಿಧ ರೀತಿಯ ಕೆಲಸಗಳಿಗೆ ನಿಯೋಜಿಸಲಾಗುತ್ತಿದೆ ಎಂದಿರುವ ಸುಬ್ರಮಣ್ಯ ಬೆಳಗ್ಗೆ ಸೂರ್ಯೋದಯಕ್ಕೂ ಮುನ್ನ ಮನೆಗಳನ್ನು ಬಿಟ್ಟು ನಗರದ ಸ್ವಚ್ಛತೆಗೆ ತೆರಳುವ ಪೌರಕಾರ್ಮಿಕರನ್ನು ಅವರ ಕೆಲಸಕ್ಕೆ ಬೇಕಾದ ಮೂಲಭೂತ ಸೌಕರ್ಯಗಳನ್ನು ಸರಿಯಾಗಿ ನೀಡದೆ ದುಡಿಸಿಕೊಳ್ಳುತ್ತಿರುವ ಪಟ್ಟಣ ಪಂಚಾಯ್ತಿಗಳು, ಪುರಸಭೆಗಳು, ನಗರಸಭೆ, ಮಹಾನಗರಪಾಲಿಕೆಗಳು ಅವರ ಬದುಕಿನ ಜೊತೆ ಚೆಲ್ಲಾಟವಾಡುತ್ತಿವೆ ಎಂದು ದೂರಿದ ಅವರು ಪೌರಕಾರ್ಮಿಕ ಮಂಜುನಾಥ್ ಸಾವಿನ ಘಟನೆಯನ್ನು ಮುಚ್ಚಿ ಹಾಕುವ ಪ್ರಯತ್ನಗಳು ನಡೆಯುತ್ತಿದ್ದು ಇದಕ್ಕೆ ಅವಕಾಶ ನೀಡದೆ ಸೂಕ್ತ ತನಿಖೆಯನ್ನು ನಡೆಸಬೇಕು ಎಂದು ಅವರು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಮಂಜು, ಮಾರುತಿ, ನಾಗರಾಜು, ನರಸಿಂಹಮೂರ್ತಿ, ಸ್ವಾಮಿ ಅಶ್ವಥಯ್ಯ, ಲಕ್ಷ್ಮೀಕಾಂತ್, ಕೆಂಪರಾಜು ಸೇರಿದಂತೆ ಮುಂತಾದವರು ನೇತೃತ್ವವಹಿಸಿದ್ದರು.

## ಪಾಲಿಕೆ : ಫೆ.28ರಂದು ಸಾರ್ವಜನಿಕ ಸಭೆ

ತುಮಕೂರು: ಮಹಾನಗರಪಾಲಿಕೆಯ 2025-26ನೇ ಸಾಲಿನ ಆಯವ್ಯಯ ಸಿದ್ಧಪಡಿಸುವ ಕುರಿತು ಫೆಬ್ರವರಿ 28ರಂದು ಮಧ್ಯಾಹ್ನ 3.30 ಗಂಟೆಗೆ ಮಹಾನಗರಪಾಲಿಕೆ ಸಭಾಂಗಣದಲ್ಲಿ 2ನೇ ಸಾರ್ವಜನಿಕ ಸಭೆ ಏರ್ಪಡಿಸಲಾಗಿದೆ.

ಮಹಾನಗರಪಾಲಿಕೆ ವ್ಯಾಪ್ತಿಯ ಸಂಘ ಸಂಸ್ಥೆಗಳ ಪದಾಧಿಕಾರಿ, ಹೋಟೆಲ್ ಅಸೋಸಿಯೇಷನ್, ಛತ್ರಗಳ ಮಾಲೀಕರ ಸಂಘ, ಸಿನಿಮಾ ಮಂದಿರಗಳ ಮಾಲೀಕರ ಸಂಘ, ಶಿಕ್ಷಣ ಸಂಸ್ಥೆಯ ಸಂಘಗಳ ಸಂಘ, ನರ್ಸಿಂಗ್ ಹೋಮ್ಸ್ ಸಂಘಗಳ ಪದಾಧಿಕಾರಿ, ವಕೀಲರ ಅಸೋಸಿಯೇ ಷನ್, ನಾಗರಿಕ ಹಿತರಕ್ಷಣಾ ಸೇವಾ ಸಮಿತಿ, ಸರ್ಕಾರೇತರ ಸಂಘ ಸಂಸ್ಥೆ, ವಾಣಿಜ್ಯ ಮತ್ತು ಕೈಗಾರಿಕೋದ್ಯಮ ಸಂಸ್ಥೆಗಳ ಪದಾಧಿಕಾರಿ ಗಳು ಹಾಗೂ ಸಾರ್ವಜನಿಕರು ಸಭೆಗೆ ಹಾಜರಾಗಿ ಸಲಹೆ/ಸೂಚನೆಗಳನ್ನು ನೀಡಿ, ಆಯವ್ಯಯವನ್ನು ಪ್ರಗತಿಶೀಲವಾಗಿ ರೂಪಿಸಲು ಸಹಕರಿಸಬೇಕೆಂದು ಪಾಲಿಕೆ ಆಯುಕ್ತ ಬಿ.ವಿ.ಅಶ್ವಿಜ ತಿಳಿಸಿದ್ದಾರೆ.

# ಎತ್ತಿನಹೊಳೆ ಯೋಜನೆ: ಆಗಸ್ಟ್ ಮಾಹೆಯೊಳಗೆ ಪೂರ್ಣಗೊಳಿಸಲು ಸಚಿವ ಪರಮೇಶ್ವರ್ ಸೂಚನೆ



ತುಮಕೂರು: ಜಿಲ್ಲೆಯಲ್ಲಿ ಎತ್ತಿನಹೊಳೆ ಯೋಜನೆಯನ್ನು ಆಗಸ್ಟ್ ಮಾಹೆಯೊಳಗೆ ಪೂರ್ಣಗೊಳಿಸಬೇಕೆಂದು ಗೃಹ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ ಅವರು ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಸಂಜೆ ಎತ್ತಿನಹೊಳೆ, ರೈಲ್ವೆ, ಹೇಮಾವತಿ, ಕೆಐಎಡಿಬಿ, ಭದ್ರಾ ಮೇಲ್ದಂಡೆ ಯೋಜನೆಗಳಿಗೆ ಸಂಬಂಧಿಸಿದಂತೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಎತ್ತಿನಹೊಳೆ ಯೋಜನೆಗಾಗಿ ಈವರೆಗೂ 2679 ಎಕರೆ ಭೂಸ್ವಾಧೀನವಾಗಿದ್ದು, ಯೋಜನೆಗೆ ಅವಶ್ಯವಿರುವ ಉಳಿದ 438 ಎಕರೆ ಭೂಮಿಯನ್ನು 4 ತಿಂಗಳೊಳಗಾಗಿ ಸ್ವಾಧೀನಪಡಿಸಿಕೊಂಡು ಎತ್ತಿನ ಹೊಳೆ ಯೋಜನೆಗೆ ಹಸ್ತಾಂತರಿಸಬೇಕೆಂದು ವಿಶೇಷ ಭೂಸ್ವಾಧೀನಾಧಿಕಾರಿ ಮಂಜುನಾಥ್ ಜಿ.ಎನ್. ಅವರಿಗೆ ಸೂಚನೆ ನೀಡಿದರು.

ಲಭ್ಯವಿರುವ ಅನುದಾನವನ್ನು ಭೂಮಾಲೀಕರಿಗೆ ಪಾವತಿಸಿ ಎತ್ತಿನ ಹೊಳೆ ಯೋಜನೆಯನ್ನು ಆಗಸ್ಟ್ ಮಾಹೆಯೊಳಗೆ ಪೂರ್ಣಗೊಳಿಸಬೇಕೆಂದು ಕಾರ್ಯನಿರ್ವಾಹಕ ಇಂಜಿನಿಯರ್ ಮುರಳೀಧರ್ ಅವರಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಎತ್ತಿನ ಹೊಳೆ ಯೋಜನೆಯ ಕಾರ್ಯನಿರ್ವಾಹಕ ಇಂಜಿನಿಯರ್ ಮುರಳೀಧರ್ ಸಚಿವರಿಗೆ ಮಾಹಿತಿ ನೀಡುತ್ತಾ, ಯೋಜನೆಯಡಿ ಜಿಲ್ಲೆಯಲ್ಲಿ 150 ಕಿ.ಮೀ. ಗುರುತ್ವಾ ಕಾಲುವೆಯನ್ನು ಹೊಂದಿದ್ದು, ಇದರಲ್ಲಿ 115 ಕಿ.ಮೀ.ವರೆಗಿನ ಕಾಮಗಾರಿ ಮುಕ್ತಾಯ ಹಂತದಲ್ಲಿದೆ. ಉಳಿದ 24 ಕಿ.ಮೀ.ನಲ್ಲಿ ಕಾಮಗಾರಿ ಪ್ರಗತಿಯಲ್ಲಿದೆ ಹಾಗೂ 3 ಕಡೆ ಅರಣ್ಯ ಪ್ರದೇಶದ ಸಮಸ್ಯೆಯಿದ್ದು, ಅಧಿಕಾರಿಗಳೊಂದಿಗೆ ಚರ್ಚಿಸಿ ಸರಿಪಡಿಸಲಾಗುವುದು ಎಂದು ತಿಳಿಸಿದರು.

ನಂತರ ಮಾತನಾಡಿದ ಸಚಿವರು, ತುಮಕೂರು-ರಾಯದುರ್ಗ ಯೋಜನೆಗಾಗಿ 1361 ಎಕರೆ ಪ್ರದೇಶವನ್ನು ರೈಲ್ವೆ ಇಲಾಖೆಗೆ ಈಗಾಗಲೇ ಹಸ್ತಾಂತರಿಸಲಾಗಿದ್ದು, ಟೆಂಡರ್ ಪ್ರಕ್ರಿಯೆ ಪೂರ್ಣಗೊಳ್ಳುವ ಹಂತದಲ್ಲಿದೆ. ಬಾಕಿ ಇರುವ 35 ಎಕರೆ ಭೂಮಿಯನ್ನು 45 ದಿನಗಳೊಳಗಾಗಿ ಸ್ವಾಧೀನಪಡಿಸಿಕೊಂಡು ರೈಲ್ವೆ ಇಲಾಖೆಗೆ ಹಸ್ತಾಂತರಿಸಬೇಕು ಎಂದು ಸೂಚನೆ ನೀಡಿದರು.

ತುಮಕೂರು-ದಾವಣಗೆರೆ ರೈಲ್ವೆ ಯೋಜನೆಯ ವಿಶೇಷ ಭೂಸ್ವಾಧೀನಾಧಿಕಾರಿ ರೇಣುಕಾ ಪ್ರಸಾದ್ ಜಂಬಗಿ ಸಭೆಗೆ ಮಾಹಿತಿ ನೀಡುತ್ತಾ, ಈಗಾಗಲೇ 770 ಎಕರೆ ಭೂಮಿಯನ್ನು ರೈಲ್ವೆ ಇಲಾಖೆಗೆ ಹಸ್ತಾಂತರಿಸಲಾಗಿದ್ದು, ಶಿರಾ ಮತ್ತು ತುಮಕೂರು ತಾಲ್ಲೂಕಿನಲ್ಲಿ ಮಾತ್ರ 61 ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಬೇಕಾಗಿದೆ. ಭೂ ಮಾಲೀಕರಿಗೆ ಪರಿಹಾರ ನೀಡಲು 20 ಕೋಟಿ ಅನುದಾನದ ಅವಶ್ಯಕತೆಯಿದೆ ಎಂದು ತಿಳಿಸಿದರು.

ಭದ್ರಾ ಮೇಲ್ದಂಡೆ ಯೋಜನೆ ಪ್ರಗತಿಯನ್ನು ಪರಿಶೀಲಿಸಿದ ಸಚಿವರು, ಬಾಕಿ ಇರುವ 576 ಎಕರೆ ಭೂ ಸ್ವಾಧೀನ ಪ್ರಕ್ರಿಯೆಯನ್ನು ಚುರುಕುಗೊಳಿಸಬೇಕು ಎಂದು ನಿರ್ದೇಶನ ನೀಡಿದಾಗ ಉತ್ತರಿಸಿದ ಯೋಜನೆಯ ಕಾರ್ಯನಿರ್ವಾಹಕ ಇಂಜಿನಿಯರ್ ಸಂದೇಶ್ ಮಾತನಾಡಿ, ಸ್ವಾಧೀನಪಡಿಸಿಕೊಂಡ 308 ಎಕರೆ ಭೂ ಮಾಲೀಕರಿಗೆ ಪರಿಹಾರ ನೀಡುವ ಕಾರ್ಯ ಪ್ರಗತಿ ಹಂತದಲ್ಲಿದೆ. ಭದ್ರಾ ಮೇಲ್ದಂಡೆ ಯೋಜನೆಗಾಗಿ ಶಿರಾ ತಾಲ್ಲೂಕಿನಲ್ಲಿ 28 ಎಕರೆ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡಿದ್ದು, ಚಿಕ್ಕನಾಯಕನ ಹಳ್ಳಿ ತಾಲ್ಲೂಕಿನಲ್ಲಿ ಸ್ವಾಧೀನಪಡಿಸಿಕೊಂಡ 280 ಎಕರೆ ಪ್ರದೇಶದ ಭೂ ಮಾಲೀಕರಿಗೆ ಪರಿಹಾರ ನೀಡಲಾಗುತ್ತಿದೆ ಎಂದು ತಿಳಿಸಿದರು.

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ(ಕೆಐಎಡಿಬಿ)ಯ ಯೋಜನೆಗಳು, ಕೊಳಗೇರಿ ಪ್ರದೇಶದ ನಿವಾಸಿಗಳಿಗೆ ವಸತಿ ಸೌಲಭ್ಯ ಕಲ್ಪಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ, ಉಪವಿಭಾಗಾಧಿಕಾರಿ ಗೌರವ್ ಕುಮಾರ್ ಶೆಟ್ಟಿ, ಎತ್ತಿನ ಹೊಳೆ, ಭದ್ರಾ ಮೇಲ್ದಂಡೆ ಯೋಜನೆ ಹಾಗೂ ರೈಲ್ವೆ ಯೋಜನೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಸ್ಲಂ ಜನರ ಸಾಮಾಜಿಕ ಮತ್ತು ಅಭಿವೃದ್ಧಿ ತಾರತಮ್ಯಕ್ಕೆ ವಿರೋಧ ಫೆ.24ರಂದು ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ



ತುಮಕೂರುಳ: ಸ್ಲಂ ಜನರ ಸಾಮಾಜಿಕ ಮತ್ತು ಅಭಿವೃದ್ಧಿ ತಾರತಮ್ಯ ಮಾಡಲಾಗುತ್ತಿರುವ ಬಗ್ಗೆ ವಿರೋಧ ವ್ಯಕ್ತಪಡಿಸಿ ಫೆ.24ರಂದು ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ಹಮ್ಮಿಕೊಂಡಿದ್ದು ಈ ಕುರಿತು ಸ್ಲಂ ಜನಾಂದೋಲನ ಕರ್ನಾಟಕ ಮತ್ತು ತುಮಕೂರು ಜಿಲ್ಲಾ ಕೊಳಗೇರಿ ನಿವಾಸಿಗಳ ಹಿತರಕ್ಷಣಾ ಸಮಿತಿ, ಸಾವಿತ್ರಿ ಪಾಯಿಪುಲೆ ಮಹಿಳಾ ಘಟಕದ ನಗರದ ಸ್ಲಂ ಭವನದಲ್ಲಿ ಸಭೆ ಹಮ್ಮಿಕೊಳ್ಳಲಾಯಿತು.

ಸಭೆಯನ್ನು ಉದ್ದೇಶಿಸಿ ಮಾತನಾಡಿ ದ ಸ್ಲಂ ಜನಾಂದೋಳನದ ರಾಜ್ಯ ಸಂಚಾಲಕರ ಎ.ನರಸಿಂಹಮೂರ್ತಿ ಸ್ಲಂ ಜನಾಂದೋಲನ ಕರ್ನಾಟಕ ಮತ್ತು ಸಾವಿತ್ರಿಬಾಯಿಪುಲೆ ಮಹಿಳಾ ಸಂಘಟನೆಯಿಂದ ಇದೇ ಫೆಬ್ರವರಿ 24 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸ್ಲಂ ಜನರ ಮೇಲಿನ ಸಾಮಾಜಿಕ ಮತ್ತು ಅಭಿವೃದ್ಧಿ ತಾರತಮ್ಯ ವಿರೋಧಿಸಿ ಹಾಗೂ ಖಾಸಗೀ ಮಾಲೀಕತ್ವದ ಕೊಳಚೆ ಪ್ರದೇಶಗಳ ಘೋಷಣೆಗೆ ತೊಡಕಾಗಿರುವ ಸಂವಿಧಾನ ವಿರೋಧಿ ವಸತಿ ಇಲಾಖೆ ಸುತ್ತೋಲೆಯನ್ನು ತಕ್ಷಣ ಹಿಂಪಡೆಯಲು ಆಗ್ರಹಿಸಿ 2025-26ನೇ ಸಾಲಿನ ಬಜೆಟ್‌ನಲ್ಲಿ ಸ್ಲಂ ಜನರ ಜನಸಂಖ್ಯೆಗೆ ಅನುಗುಣವಾಗಿ ಬಜೆಟ್‌ನಲ್ಲಿ ಪಾಲು. 2023ರ ವಿಧಾನ ಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ನೀಡಿರುವ ಪ್ರಣಾಳಿಕೆ ಭರವಸೆಗಳನ್ನು ಈಡೇರಿಸಲು ಒತ್ತಾಯಿಸಿ ಹಾಗೂ ಸ್ಲಂ ಜನರಿಗೆ ಪ್ರತ್ಯೇಕ ಸಚಿವಾಲಯ ಮತ್ತು ನಗರ ಉದ್ಯೋಗ ಖಾತ್ರಿ ಯೋಜನೆ ಘೋಷಣೆ ಸೇರಿದಂತೆ ನಿವೇಶನ ರಹಿತರಿಗೆ ವಸತಿ ಕಲ್ಪಿಸುವ ಲ್ಯಾಂಡ್ ಬ್ಯಾಂಕ್ ಯೋಜನೆಯನ್ನು ಜಾರಿಗೊಳಿಸುವುದು ಸೇರಿದಂತೆ ವಿವಿಧ ಹಕ್ಕೋತ್ತಾಯಗಳ ಈಡೇರಿಕೆಗೆ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗುತ್ತಿದೆ. ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳ 5 ಸಾವಿರ ಕಾರ್ಯಕರ್ತರು ಫ್ರೀಡಂ ಪಾರ್ಕ್‌ನಲ್ಲಿ ಸಮಾವೇಶ ಗೊಂಡು ಈ ಕೆಳಕಂಡ ಹಕ್ಕೋತ್ತಾಯ ಗಳನ್ನು ವಸತಿ ಸಚಿವರ ಮೂಲಕ ಸರ್ಕಾರಕ್ಕೆ ಸಲ್ಲಿಸಲಾಗುತ್ತಿದೆ ಎಂದರು

ಸ್ಲಂ ಸಮಿತಿ ಕಾರ್ಯದರ್ಶಿ ಅರುಣ್ ಟಿ.ಜಿ ಮಾತನಾಡಿ ದರು. ಈ ಸಂದರ್ಭ ದಲ್ಲಿ ತುಮಕೂರು ಸ್ಲಂ ಸಮಿತಿ ಪದಾಧಿಕಾರಿಗಳಾದ ಶಂಕ್ರಯ್ಯ, ತಿರುಮಲಯ್ಯ, ಕೃಷ್ಣಮೂರ್ತಿ ಮುಬಾರಕ್, ಕೆಂಪಣ್ಣ ಹಾಗೂ ಸಾವಿತ್ರಿ ಬಾಯಿಪುಲೆ ಮಹಿಳಾ ಘಟಕದ ಅನುಪಮಾ, ಗುಲ್ನಾಜ್ ಹನುಮಕ್ಕ, ಗಂಗಾ, ಯುವ ಪದಾದಿಕಾರಿಗಳಾದ ಮೋಹನ್‌ಟಿ.ಆರ್, ಧನಂಜಯ್, ಗಣೇಶ್, ನಿವೇಶನ ಹೋರಾಟ ಸಮಿತಿಯ ಮಂಗಳಮ್ಮ, ರತ್ನಮ್ಮ, ಸಂಧ್ಯಾ, ವಸಂತಮ್ಮ ಮುಂತಾದವರು ಪಾಲ್ಗೊಂಡಿದ್ದರು

## ಫೆ. 24ರಂದು ಕೆಡಿಪಿ ಸಭೆ

ತುಮಕೂರು: ಗೃಹ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಫೆಬ್ರವರಿ 24ರಂದು ಬೆಳಿಗ್ಗೆ 10.30 ಗಂಟೆಗೆ 2024-25ನೇ ಸಾಲಿನ 3ನೇ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ ನಡೆಯಲಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿ.ಪ್ರಭು ತಿಳಿಸಿದ್ದಾರೆ.


## ಮಾ.2: ಹೊನಲು ಬೆಳಕಿನ ಮ್ಯಾಟ್ ಕಬಡ್ಡಿ ಪಂದ್ಯಾವಳಿ

ತುಮಕೂರು: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶ್ರೀ ಸಿದ್ದಗಂಗಾ ಕೃಷಿ ಮತ್ತು ಕೈಗಾರಿಕಾ ವಸ್ತುಪ್ರದರ್ಶನ ಟ್ರಸ್ಟ್‌ನ ಸಹಯೋಗದಲ್ಲಿ ಮಾರ್ಚ್ 2ರಂದು ಭಾನುವಾರ ಮಧ್ಯಾಹ್ನ 3 ಗಂಟೆಗೆ ಶ್ರೀ ಸಿದ್ಧಗಂಗಾ ಮಠದ ಆವರಣದಲ್ಲಿ "ಹೊನಲು ಬೆಳಕಿನ ಮ್ಯಾಟ್ ಕಬಡ್ಡಿ ಪಂದ್ಯಾವಳಿ"ಯನ್ನು ಆಯೋಜಿಸಲಾಗಿದೆ.

ವಿಜೇತ ತಂಡಗಳಿಗೆ ನಗದು ಬಹುಮಾನ, ಪಾರಿತೋಷಕ, ಪದಕ ಮತ್ತು ಪ್ರಶಸ್ತಿ ಪತ್ರಗಳನ್ನು ವಿತರಿಸಲಾಗುವುದು. ಆಸಕ್ತ ತಂಡಗಳು ಮಾರ್ಚ್ 1ರೊಳಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ತುಮಕೂರು ಕಚೇರಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊ.ಸಂ. 9980588415/ 9741291379ನ್ನು ಸಂಪರ್ಕಿಸಬೇಕೆಂದು ಸಹಾಯಕ ನಿರ್ದೇಶಕ ರೋಹಿತ್ ಗಂಗಾಧರ್ ತಿಳಿಸಿದ್ದಾರೆ.

## ತುಮಕೂರಲ್ಲಿ ಐಟಿ ಹಬ್; ವಸಂತನರಸಾಪುರದ ವರೆಗೆ ಮೆಟ್ರೋ ವಿಸ್ತರಣೆಗೆ ಬಜೆಟ್‌ನಲ್ಲಿ ಪರಿಗಣಿಸಲು ಮುಖ್ಯಮಂತ್ರಿಗೆ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಮನವಿ




ತುಮಕೂರು: ಬೆಂಗಳೂರಿನ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯರವರನ್ನು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಪಿ.ಆರ್. ಕುರಂದವಾಡ ಹಾಗೂ ಕಾರ್ಯದರ್ಶಿ ಟಿ.ಎನ್. ಶ್ರೀಕಂಠಸ್ವಾಮಿ ಅವರು ಭೇಟಿ ಮಾಡಿ ಜಿಲ್ಲೆಯ ವಾಣಿಜ್ಯ, ಕೈಗಾರಿಕಾ ಅಭಿವೃದ್ಧಿ ಹಾಗೂ ಸಾರ್ವಜನಿಕರಿಗೆ ಮೂಲಭೂತ ಸೌಕರ್ಯ ಕಲ್ಪಿಸುವ ವಿಚಾರವಾಗಿ ಬೇಡಿಕೆಗಳ ಪ್ರಸ್ತಾವನೆಯನ್ನು ಸಲ್ಲಿಸಿ, 2025-26 ನೇ ಸಾಲಿನ ಬಜೆಟ್ ನಲ್ಲಿ ಪರಿಗಣಿಸುವಂತೆ ಮನವಿ ಮಾಡಿದ್ದಾರೆ.

ಶೈಕ್ಷಣಿಕ ನಗರ ಎಂದು ಪ್ರಸಿದ್ದಿಯಾಗಿರುವ ತುಮಕೂರು ಜಿಲ್ಲೆಯಲ್ಲಿ ಏಳು ಇಂಜನಿಯರಿಂಗ್ ಕಾಲೇಜು, ಮೂರು ಮೆಡಿಕಲ್ ಕಾಲೇಜುಗಳು. ಸುಮಾರು ಐಟಿಐ ಕಾಲೇಜುಗಳು, ಪಾಲಿಟೆಕ್ನಿಕ್ ಕಾಲೇಜುಗಳು ಹಾಗೂ ತುಮಕೂರು ಯನಿರ್ವಸಿಟಿ ಇದ್ದು ಸುಮಾರು 50ರಿಂದ 60 ಸಾವಿರ ಜನರು ತುಮಕೂರಿನಿಂದ ಬೆಂಗಳೂರಿಗೆ ವಿವಿಧ ಐಟಿ ಕಂಪನಿಗಳಿಗೆ ಹೋಗುತ್ತಿರುವುದರಿಂದ ತುಮಕೂರಿನಲ್ಲೇ ಐಟಿ ಹಬ್‌ನ್ನು ನಿರ್ಮಾಣ ಮಾಡಬೇಕು ಎಂದು ಕೋರಿದ್ದಾರೆ.

ನಗರದ ಮಹಾನಗರ ಪಾಲಿಕೆಯ ಸರಹದ್ದಿನಲ್ಲಿ ಬರುವ ಕೈಗಾರಿಕೆಗಳಿಗೆ ಆಸ್ತಿತೆರಿಗೆಯನ್ನು ಏಋಂಆಃ ಇಂದ ಮಹಾನಗರಪಾಲಿಕೆಗೆ ವರ್ಗಾವಣೆ ಮಾಡಿಕೊಂಡು ನಂತರ ಪ್ರತ್ಯೇಕ ಕೈಗಾರಿಕಾ ವರ್ಗಮಾಡಿ ಕಮರ್ಷಿಯಲ್ ಹಾಗೂ ರೆಸಿಡೆನ್‌ಷಿಯಲ್ ಸ್ಲಾಬ್ ಗಿಂತ ತೆರಿಗೆಯನ್ನು ಕಡಿಮೆಮಾಡಿ ಪ್ರಸ್ತುತ ಗ್ರಾಮಪಂಚಾಯಿತಿ ವ್ಯಾಪಿಯಲ್ಲಿ ಬರುವ ಕೈಗಾರಿಕಾ ಪ್ರದೇಶಗಳ ಆಸ್ತಿಗಳಿಗೆ ನಿಗದಿಪಡಿಸಿರುವ ಆಸ್ತಿ ತೆರಿಗೆಯಂತೆ ನಗರ ಕೈಗಾರಿಕಾ ಪ್ರದೇಶಗಳ ಆಸ್ತಿಗಳಿಗೆ ತೆರಿಗೆಯನ್ನು ನಿಗದಿಪಡಿಸುವುದು ಹಾಗೂ ಕೈಗಾರಿಕಾ ಪ್ರದೇಶವು ಮಹಾನಗರ ಪಾಲಿಕೆಗೆ ವರ್ಗಾವಣೆಗೊಂಡ ಪ್ರಸ್ತುತ ವರ್ಷದಿಂದ ನಾವು ತೆರಿಗೆಯನ್ನು ಕಟ್ಟಲು ಸಿದ್ದರಿದ್ದೇವೆ.

ಬೆಂಗಳೂರಿನಿಂದ ತುಮಕೂರು ಹಾಗೂ ವಸಂತ ನರಸಾಪುರ ಕೈಗಾರಿಕಾ ಪ್ರದೇಶದವರೆಗೆ ಮೆಟ್ರೋ ಟ್ರೈನ್ ಅನ್ನು ವಿಸ್ತರಿಸುವುದು, 60 ವರ್ಷ ಅಥವಾ ಅದಕ್ಕಿಂತ ಹೆಚ್ಚು ವಯಸ್ಸಿನ ವ್ಯಾಪಾರಿಗಳು ಹಾಗೂ ಕೈಗಾರಿಕೋದ್ಯಮಿಗಳು ತಮ್ಮ ಜೀವಿತಾವಧಿಯಲ್ಲಿ ಸರ್ಕಾರಕ್ಕೆ ಎಲ್ಲಾ ಬಗೆಯ ತೆರಿಗೆಗಳನ್ನು ಕಟ್ಟುತ್ತಾಬಂದಿದ್ದು ಸರಿಯಷ್ಟೆ, ಇವರಿಗೆ ತಮ್ಮ 60 ವರ್ಷದ ನಂತರ ವಯಸ್ಸಿನಲ್ಲಿ ಪಿಂಚಣಿ ಯೋಜನೆ ಜಾರಿಗೊಳಿಸುವುದು ಸೇರಿದಂತೆ ಹತ್ತು ಹಲವು ಬೇಡಿಕೆಗಳ ಮನವಿಯನ್ನು ಸಲ್ಲಿಸಿ, ಈ ವರ್ಷದ ಬಜೆಟ್ ನಲ್ಲಿ ಮಂಡಿಸುವಂತೆ ಹಾಗೂ ತುಮಕೂರು ಜಿಲ್ಲೆಗೆ ವಿಶೇಷ ಪ್ರಾತಿನಿಧ್ಯತೆ ಕಲ್ಪಿಸುವಂತೆ ಮುಖ್ಯಮಂತ್ರಿಗಳಿ ಮನವಿ ಮಾಡಿದ್ದಾರೆ.

# ಹುಳಿಯಾರು ಪ.ಪಂ. ವ್ಯಾಪ್ತಿಯಲ್ಲಿ ಇ– ಆಸ್ತಿ ಅಭಿಯಾನ




ಹುಳಿಯಾರು: ಹುಳಿಯಾರು ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಇ– ಆಸ್ತಿ ಅಭಿಯಾನ ಆರಂಭಿಸಲಾಗಿದೆ ಎಂದು ಹುಳಿಯಾರು ಪಟ್ಟಣ ಪಂಚಾಯಿತಿ ಅಧ್ಯಕ್ಷೆ ರತ್ನಮ್ಮ ತಿಳಿಸಿದ್ದು ಆಸ್ತಿ ಮಾಲೀಕರು ಇದರ ಪ್ರಯೋಜನ ಪಡೆದುಕೊಳ್ಳುವಂತೆ ಅವರು ಮನವಿ ಮಾಡಿದ್ದಾರೆ.

ಹುಳಿಯಾರು ಪಟ್ಟಣ ಪಂಚಾಯಿತಿಯಲ್ಲಿ ಈ ಬಗ್ಗೆ ಅವರು ಮಾಹಿತಿ ನೀಡಿ ಮಾತನಾಡಿ ನಮೂನೆ 3 (ಎ–ರಿಜಿಸ್ಟರ್) ಹಾಗೂ ನಮೂನೆ –3ಎ (ಬಿ–ರಿಜಿಸ್ಟರ್)ನಲ್ಲಿ ಇ– ಆಸ್ತಿ ನೋಂದಾಯಿಸಲು ಅಭಿಯಾನ ಆರಂಭಗೊಂಡಿದ್ದು ಇದಕ್ಕಾಗಿ ಪಟ್ಟಣ ಪಂಚಾಯಿತಿಯಲ್ಲಿ ಪ್ರತ್ಯೇಕ ಕೌಂಟರ್ ತೆರೆದು ವ್ಯವಸ್ಥೆಗೊಳಿಸಲಾಗಿದೆ ಎಂದರು.

ನಕ್ಷೆ ಉಲ್ಲಂಘನೆ, ಪಾರ್ಕಿಂಗ್ ಜಾಗಕ್ಕೆ ಅವಕಾಶ ಕಲ್ಪಿಸದಿರುವುದು, ಅನುಮತಿ ಪಡೆದಿರುವುದಕ್ಕಿಂತ ಹೆಚ್ಚು ಮಹಡಿ ನಿರ್ಮಿಸಿರುವುದು ಸೇರಿದಂತೆ ನಿಯಮ ಮೀರಿ ಕಟ್ಟಿರುವ ಕಟ್ಟಡಗಳಿಗೆ ಕಟ್ಟಡಗಳಿಗೆ ಬಿ ಖಾತೆ ಪಡೆಯಬಹುದಾಗಿದ್ದು ನಮೂನೆ–3ಎ (ಬಿ–ರಿಜಿಸ್ಟರ್) ಪಡೆಯಲು ಅವಕಾಶವಿದ್ದು ಸಂಬಂಧಪಟ್ಟ ಆಸ್ತಿ ಮಾಲೀಕರುಗಳು ತಮ್ಮ ಸ್ವತ್ತಿಗೆ ಸಂಬಂಧ ಪಟ್ಟ ದಾಖಲೆಗಳನ್ನು ಪಟ್ಟಣ ಪಂಚಾಯಿತಿ ಕಚೇರಿಗೆ ಸಲ್ಲಿಸಿ ಖಾತೆ ಸರಿಪಡಿಸಿಕೊಳ್ಳಬಹುದಾಗಿದೆ ಎಂದರು.

ಇ–ಆಸ್ತಿಯನ್ನು ಈವರೆಗೆ ಪಡೆಯದೇ ಇರುವ ಖಾತೆಗಳಿಗೆ ದಿನಾಂಕ: 10–05–2025 ರ ಒಳಗಾಗಿ ಇ–ಅಸ್ತಿಯನ್ನು ಪಡೆದುಕೊಳ್ಳುವುದು, ಹೆಚ್ಚಿನ ಮಾಹಿತಿಯಲ್ಲಿ ಕಛೇರಿಯ ಸಮಯದಲ್ಲಿ ಕಛೇರಿಗೆ ಬಂದು ಅಧಿಕಾರಿಗಳಿಂದ ಪಡೆದುಕೊಳ್ಳುವಂತೆ ತಿಳಿಸಿದ್ದಾರೆ.

ಈ ವೇಳೆ ಪಟ್ಟಣ ಪಂಚಾಯಿತಿ ಉಪಾಧ್ಯಕ್ಷೆ ಕಾವ್ಯಾರಾಣಿ, ಮುಖ್ಯಾಧಿಕಾರಿ ನಾಗಭೂಷಣ್ ಇದ್ದರು.

# ಸಾಮಾಜಿಕ ರಂಗ ಪ್ರಯೋಗದಿಂದ ಹೊಸ ಆಲೋಚನೆಗಳ ಹುಟ್ಟು



ತುಮಕೂರು: ಐತಿಹಾಸಿಕ ಮತ್ತು ಪೌರಾಣಿಕ ನಾಟಕಗಳಿಗೆ ಸೀಮಿತವಾಗಿದ್ದ ಭಾರತೀಯ ರಂಗಭೂಮಿಯಲ್ಲಿ ಸಾಮಾಜಿಕ ನಾಟಕಗಳ ಪ್ರಯೋಗ ಆರಂಭವಾದ ನಂತರ ಹಲವಾರು ಬದಲಾವಣೆಗಳನ್ನು ಕಾಣಬಹುದಾಗಿದೆ. ಸಾಮಾಜಿಕ ನಾಟಕಗಳು ಮನರಂಜನೆಯ ಜೊತೆಗೆ,ನಮ್ಮ ಸುತ್ತಮುತ್ತಲಿನ ಸಾಮಾಜಿಕ, ಆರ್ಥಿಕ, ರಾಜಕೀಯ ಆಗು ಹೋಗುಗಳನ್ನು ಪ್ರೇಕ್ಷಕರ ಮುಂದಿಡುವ ಮೂಲಕ ಹೊಸ ಆಲೋಚನೆಗಳನ್ನು ಹುಟ್ಟು ಹಾಕಲಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಸ್.ಸಿದ್ದಲಿಂಗಪ್ಪ ತಿಳಿಸಿದ್ದಾರೆ.

ನಗರದ ಕನ್ನಡ ಭವನದಲ್ಲಿ ಗ್ರಾಮೀಣ ಕ್ರಿಯಾತ್ಮಕ ರಂಗ ತಂಡ(ರಿ),ತುಮಕೂರು ಇವರು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಆಯೋಜಿಸಿದ್ದ "ಸುಯೋಧನ"ನಾಟಕ ಪ್ರಯೋಗಕ್ಕೆ ಚಂಡೆ ನುಡಿಸುವ ಮೂಲಕ ಚಾಲನೆ ನೀಡಿ ಮಾತನಾಡುತಿದ್ದ ಅವರು, ನಾಟಕಗಳ ಪ್ರದರ್ಶನಕ್ಕೆ ಆಸಕ್ತರಿಗೆ ಆಹ್ವಾನದ ಅಗತ್ಯವಿಲ್ಲ. ಇಲ್ಲಿ ಸೇರಿರುವ ಎಲ್ಲಾ ರಂಗಾಸಕ್ತರು ಕಲಾವಿಧರನ್ನು ಪ್ರೋತ್ಸಾಹಿಸಿ, ಅವರು ಮತ್ತಷ್ಟು ಪ್ರಯೋಗಗಳನ್ನು ಮಾಡುವಂತೆ ಪ್ರೇರೆಪಿಸಲಿ ಎಂದು ಶುಭ ಹಾರೈಸಿದರು.

ಸಾಹಿತಿ ಡಾ.ಬಿ.ಸಿ.ಶೈಲಾ ನಾಗರಾಜು ಮಾತನಾಡಿ, ಗ್ರಾಮೀಣ ಕ್ರಿಯಾತ್ಮಕ ರಂಗ ತಂಡ ಸುಮಾರು 15ಕ್ಕೂ ಹೆಚ್ಚು ವರ್ಷಗಳಿಂದ ರಂಗಭೂಮಿಯಲ್ಲಿ ತನ್ನನ್ನು ತಾನು ತೊಡಗಿಸಿಕೊಂಡಿದೆ. ಹಲವಾರು ಹೊಸ ನಾಟಕಗಳು, ಕಲಾವಿದರನ್ನು ರಂಗಭೂಮಿಗೆ ಪರಿಚಯಿಸಿದೆ. ಪೌರಾಣಿಕ ವಸ್ತುಗಳನ್ನೇ ತೆಗೆದುಕೊಂಡು,ಸಾಮಾಜಿಕ ನಾಟಕ ಕಟ್ಟುವುದು ನಿಜಕ್ಕೂ ಸವಾಲಿನ ಕೆಲಸ. ಈ ತಂಡ ಪ್ರಯೋಗಿಸುತ್ತಿರುವ ಸುಯೋಧನ ನಾಟಕ 15ಕ್ಕೂ ಹೆಚ್ಚು ಪ್ರಯೋಗ ಕಂಡಿರುವುದು ಅವರ ಕ್ರಿಯಾಶೀಲತೆಗೆ ಸಾಕ್ಷಿಯಾಗಿದೆ. ರಂಗ ತಂಡಗಳಿಗೆ ಹಣಕಾಸು ನೆರವಿಗಿಂತ, ಪ್ರೇಕ್ಷಕರಾಗಿ ಪಾಲ್ಗೊಂಡು, ನಾಟಕ ನೋಡುವ ಮೂಲಕವೂ ರಂಗಭೂಮಿಯನ್ನು ಬೆಳೆಸಬಹುದಾಗಿದೆ ಎಂದರು.

ಆಕಾಶವಾಣಿ ಮತ್ತು ದೂರದರ್ಶನ ಕಲಾವಿದರಾದ ಸಿ.ಹೆಚ್.ಸಿದ್ದಯ್ಯ , ಪತ್ರಕರ್ತ ರಂಗನಾಥ ಕೆ.ಮರಡಿ, ಉಪನ್ಯಾಸಕ ಡಾ. ಪವನ್ ಗಂಗಾಧರ್ ಮಾತನಾಡಿದರು.

ವೇದಿಕೆಯಲ್ಲಿ ಗ್ರಾಮೀಣ ಕ್ರಿಯಾತ್ಮಕ ರಂಗ ತಂಡ(ರಿ)ದ ರಂಗ ಸಂಘಟಕ ಶಿವಕುಮಾರ್ ತಿಮ್ಮಲಾಪುರ, ಸ್ವಾಂದೇನಹಳ್ಳಿ ಸಿದ್ದರಾಜು, ಕಾಂತರಾಜು ಕೌತುಮಾರನಹಳ್ಳಿ, ಆಶ್ವಿನಿ ಮತ್ತಿತರರು ಉಪಸ್ಥಿತರಿದ್ದರು.

# ಕುಣಿಗಲ್: ಬಿ–ಖಾತಾ ಅಭಿಯಾನ ಸದುಪಯೋಗಕ್ಕೆ ಕರೆ



ಕುಣಿಗಲ್ : ಪುರಸಭೆಯು ಸರ್ಕಾರದ ಆದೇಶ ಅನ್ವಯ ಜನಸಾಮಾನ್ಯರಿಗೆ ಯಾವುದೇ ತೊಂದರೆ ಆಗದಂತೆ ರಾಜ್ಯಾದ್ಯಂತ ಮೂರು ತಿಂಗಳ ಇ –ಖಾತಾ, ಬಿ –ಖಾತೆ ಅಭಿಯಾನವನ್ನು ಆರಂಭಿಸಿದ್ದು ಪಟ್ಟಣದ ಪುರಸಭಾ ವ್ಯಾಪ್ತಿಯಲ್ಲಿ ಬರುವ ಪಟ್ಟಣದಲ್ಲಿರುವ ಆಸ್ತಿಗಳನ್ನು ಇ –ಖಾತೆ, ಬಿ –ಖಾತೆ ಮಾಡುವ ಅಭಿಯಾನವನ್ನು ಕೈಗೊಳ್ಳಲಾಗಿದೆ ಎಂದು ಪುರಸಭಾ ಮುಖ್ಯಧಿಕಾರಿ ಮಂಜುಳಾ ತಿಳಿಸಿದರು.

ಪುರಸಭಾ ಕಛೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ಪೌರಾಡಳಿತ ನಿರ್ದೇಶನಾಲಯ ನಗರಾಭಿವೃದ್ಧಿ ಇಲಾಖೆಯ ವಸತಿ ಕಟ್ಟಡಗಳು ವಾಣಿಜ್ಯ ಕಟ್ಟಡಗಳು ಖಾಲಿ ನಿವೇಶನಗಳ ಆಸ್ತಿ ಮಾಲೀಕರುಗಳು ಸರ್ಕಾರದ ಆದೇಶದಂತೆ ಬರುವ ದಿನಾಂಕ. 10––5– 2025ರ ವರೆಗೆ ಇ –ಖಾತೆ ಅಭಿಯಾನವನ್ನು ಆರಂಭ ಮಾಡಿದ್ದು ಈಗಾಗಲೇ ಶಾಸಕ ಡಾಕ್ಟರ್ ಎಚ್ ಡಿ ರಂಗನಾಥ್ ಇ– ಖಾತೆ ಅಭಿಯಾನಕ್ಕೆ ಚಾಲನೆ ನೀಡಿದ್ದು ಪಟ್ಟಣದ ನಾಗರಿಕರು ಆಸ್ತಿಗೆ ಸಂಬಂಧಿಸಿದಂತೆ ದಾಖಲೆ ಪತ್ರಗಳು, ದೃಡೀಕರಣ ಪತ್ರ, ನಿವೇಶನದ ಪತ್ರ, ನಕ್ಷೆ,ಋಣ ಭಾರ ಪ್ರಮಾಣ ಪತ್ರ,ಚಾಲ್ತಿ ಆಸ್ತಿ ತೆರಿಗೆ ಪಾವತಿ ರಸೀದಿ, ಮಾಲೀಕರ ಫೋಟೋ, ಮಾಲೀಕರ ಗುರುತಿನ ಪತ್ರ ಮೊಬೈಲ್ ಸಂಖ್ಯೆಯನ್ನು ಒದಗಿಸಬೇಕು ಪಟ್ಟಣದಲ್ಲಿ 10762 ಆಸ್ತಿ ಖಾತೆದಾರರಿದ್ದು ಇದರಲ್ಲಿ 6963 ಅಧಿಕೃತ ವಾಗಿದ್ದು ಅನಾಧಿಕೃತವಾಗಿ 3799 ಇದ್ದು ಈಗಾಗಲೇ 1500 ಇ –ಖಾತೆಯನ್ನು ಪೂರ್ಣಗೊಳಿಸಲಾಗಿದೆ ಪಟ್ಟಣದ ಆಸ್ತಿ ಮಾಲೀಕರು ಕೂಡಲೇ ಪುರಸಭೆಯಲ್ಲಿ ಅರ್ಜಿ ನಮೂನೆ ಪಡೆದು ದಾಖಲೆಗಳನ್ನು ಸಲ್ಲಿಸಿ ಸರ್ಕಾರದ ಈ ಯೋಜನೆಯನ್ನು ಸದುಪಯೋಗ ಮಾಡಿಕೊಳ್ಳಬೇಕೆಂದು ತಿಳಿಸಿದರು.

# ಮಧುಗಿರಿ ಟಿವಿವಿ ಕಾಲೇಜಿನಲ್ಲಿ 'ಮಾತೃಭಾಷಾ' ದಿನಾಚರಣೆ



ಮಧುಗಿರಿ :–ಮಾತೃಭಾಷೆ ಜಗತ್ತಿಗೆ ನಮ್ಮ ಅಸ್ತಿತ್ವವನ್ನು ಪರಿಚಯಿಸುತ್ತದೆ, ತಾಯಿ ಹಾಲಿನೊಂದಿಗೆ ಬಂದ ತೊಟ್ಟಿಲಭಾಷೆ ಹೃದಯ ಭಾಷೆಯಾಗಿ, ಪ್ರಬಲಶಕ್ತಿಯಾಗಿ ರೂಪಗೊಳ್ಳುತ್ತದೆ ಎಂದು ಪ್ರೊ.ಮ ಲ ನ ಮೂರ್ತಿ ಅಭಿಪ್ರಾಪಟ್ಟರು.

ಪಟ್ಟಣದ ಟಿ ವಿ ವಿ ಬಿ ಎಡ್ ಕಾಲೇಜಿಲ್ಲಿಏರ್ಪಡಿಸಿದ್ದ ಮಾತೃಭಾಷಾ ದಿನಾಚರಣೆ ಮತ್ತು ಪುಸ್ತಕ ಪ್ರದರ್ಶನದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಭಾಷೆ ಬಳಸಿ ಬೆಳೆಸಬೇಕು. ಭಾಷೆ ಬದುಕು ಬೇರೆ ಬೇರೆ ಅಲ್ಲ, ಬದುಕು ಸಮೃದ್ಧವಾಗಿದ್ದರೆ ಭಾಷೆ ಭವ್ಯತೆ ಭದ್ರತೆಯನ್ನು ಪಡೆಯುತ್ತದೆ.ಮನದೊಳಗಣ ಮಾತೃಭಾಷೆ ಹಿತ ಮಿತ ಹಿಗ್ಗು ತಂದುಕೊಡುತ್ತದೆ. ಜನರ ಸಂಸ್ಕೃತಿ ಹಿರಿದಾಗಬೇಕೆನಿಸಿದರೆ ಮಾತೃಭಾಷೆಗೆ ಆದ್ಯತೆ. ನೀಡಬೇಕು, ಇತರಭಾಷೆಗಳನ್ನು ನಮ್ಮ ಭಾವಕೋಶಕ್ಕೆ ತಂದುಕೊಳ್ಳುವ ಸಾಮರ್ಥ್ಯವಿದ್ದು, ಎಲ್ಲಭಾಷೆಗಳೊಂದಿಗೆ ಬೆಳೆಯುವ ಬುದ್ಧಿಭಾವಗಳು ಅರಳಬೇಕು.ಜ್ಞಾನ,ಅನ್ನ ಮಾರ್ಗಗಳಿಗೆ ಮಾತೃಭಾಷೆ ಯೇ ಅಕ್ಷಯನಿಧಿ ಎಂದರು. ಗ್ರಂಥಪಾಲಕ ನಾಗಭೂಷಣ ಮಾತನಾಡಿ, ಮಾತೃಭಾಷೆಯ ಶಿಕ್ಷಣ ಮತ್ತು ಪುಸ್ತಕಗಳ ಓದು ಮಾನಸಿಕ ವಿಕಾಸಕ್ಕೆ ಸಹಕಾರಿಯಾಗಿದೆ, ಸರಳ ಸುಲಭ ಸುಗಮ ಸಂವಹನಕ್ಕೆ ಮಾತೃಭಾಷೆ ತೆರೆದಬಾಗಿಲು, ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಶಿವಕುಮಾರಸ್ವಾಮಿ ಮಾತನಾಡಿ ಮಾತೃಭಾಷೆ ಎಲ್ಲರಿಗೂ ಅರ್ಥವಾಗುವಂತಿರಬೇಕು, ಆಗ ಮಾತ್ರ ಅದು ಹೃದಯಕ್ಕೆ ಹತ್ತಿರವಾಗುತ್ತದೆ, ಬಹು ಸಂಸ್ಕೃತಿ ಯನ್ನು ಪೋಶಿಸುತ್ತದೆ ತನ್ನ ಅಸ್ತಿತ್ವವನ್ನು ಗುರುತಿಸಿಕೊಳ್ಳುತ್ತದೆ ಎಂದರು, ಕಾರ್ಯಕ್ರಮದಲ್ಲಿ ಉಪನ್ಯಾಸಕ ಮಂಜುಪ್ರಸಾದ್ ಮಾತನಾಡಿ ಕನ್ನಡಭಾಷೆಯ ಉಗಮ ವಿಕಾಸ ಬೆಳೆದು ಬಂದ ದಾರಿಯನ್ನು ತಿಳಿಸಿದರು ದೈಹಿಕ ಶಿಕ್ಷಣ ನಿರ್ದೇಶಕ ಎಮ್ ಆರ್. ವೆಂಕಟೇಶಮೂರ್ತಿ ಯವರು ಕನ್ನಡ ಭಾಷೆಯ ವಿವಿಧ ಕಾಲ ಘಟ್ಟಗಳನ್ನು ಉದಾಹರಣೆ ಸಹಿತ ವಿವರಿಸಿದರು, ಕಾರ್ಯಕ್ರಮದಲ್ಲಿ ಬೋಧಕ, ಬೋಧಕೇತರರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# 'ಬಾಣಂತಿಯರ ಸಾವು' ತಡೆಗೆ ರಾಜ್ಯ ಸರ್ಕಾರದಿಂದ ಹೊಸ ನಿಯಮ ಜಾರಿ



ಬೆಂಗಳೂರು : ರಾಜ್ಯದಲ್ಲಿ ಬಾಣಂತಿಯರ ಸಾವು ತಡೆಗೆ ರಾಜ್ಯ ಸರ್ಕಾರವು ಮಹತ್ವದ ಕ್ರಮ ಕೈಗೊಂಡಿದ್ದು, ಇನ್ಮುಂದೆ ಆಸ್ಪತ್ರೆಗಳಲ್ಲಿ ಈ ಮಹತ್ವದ ನಿಯಮಗಳನ್ನು ಪಾಲಿಸುವಂತೆ ಮಹತ್ವದ ಆದೇಶ ಹೊರಡಿಸಲಾಗಿದೆ.

ತಾಯಿ ಆರೋಗ್ಯ ಕಾರ್ಯಕ್ರಮದ ಅಡಿಯಲ್ಲಿ ಸರ್ಕಾರಿ ಆರೋಗ್ಯ ಸಂಸ್ಥೆಗಳಲ್ಲಿ ಸಹಜ ಮತ್ತು ಸಿಜೇರಿಯನ್ ಶಸ್ತ್ರ ಚಿಕಿತ್ಸೆಗಳು ಜರಗುತ್ತಿವೆ.

ತಾಯಿ ಆರೋಗ್ಯ ಕಾರ್ಯಕ್ರಮದ ಮಾರ್ಗಸೂಚಿಯಂತೆ ಸಹಜ ಹೆರಿಗೆಯಾದ ಬಾಣಂತಿಯನ್ನು ಕನಿಷ್ಠ 3 ದಿವಸಗಳು ಹಾಗೂ ಸಿಜೇರಿಯನ್ ಶಸ್ತ್ರ, ಚಿಕಿತ್ಸೆ ಬಳಿಕ 7 ದಿವಸಗಳ ವರೆಗೂ ಸರ್ಕಾರಿ ಆಸ್ಪತ್ರೆಯಲ್ಲಿ ಕಡ್ಡಾಯವಾಗಿ ಒಳರೋಗಿಯಾಗಿ ಚಿಕಿತ್ಸೆಯನ್ನು ನೀಡುವುದು. ಒಂದು ವೇಳೆ, ಜಿಲ್ಲಾ ಆಸ್ಪತ್ರೆಯಲ್ಲಿ ಹಾಸಿಗೆಗಳ ಕೊರತೆ ಇದ್ದಲ್ಲಿ ಹಾಗೂ ಬಾಣಂತಿ ಮತ್ತು ನವಜಾತ ಶಿಶುವಿನ ಆರೋಗ್ಯವು ತೃಪ್ತಿಕರವಾಗಿದಲ್ಲಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಸಮನ್ವಯದೊಂದಿಗೆ ಹತ್ತಿರದ ತಾಲ್ಲೂಕು ಅಥವಾ **CemONC** ಸಮುದಾಯ ಆರೋಗ್ಯ ಕೇಂದ್ರಕ್ಕೆ ಶಸ್ತ್ರ ಚಿಕಿತ್ಸೆಗೊಂಡ 5 ದಿವಸಗಳ ಬಳಿಕ ಮಾರ್ಗಸೂಚಿಯಂತೆ ನಗು–ಮಗು ವಾಹನದಲ್ಲಿ ವರ್ಗಾಯಿಸಿ ಒಳರೋಗಿಯಾಗಿ ದಾಖಲಿಸಿ ಚೇತರಿಸಿಕೊಳ್ಳಲು ಅನುವು ಮಾಡಿಕೊಡುವುದು. ಬಾಣಂತಿಗೆ ತಗುಲುವ ಖರ್ಚು ವೆಚ್ಚಗಳನ್ನು ಜೆ.ಎಸ್.ಎಸ್.ಕೆ ಕಾರ್ಯಕ್ರಮದಲ್ಲಿ ಭರಿಸುವುದು.

ಈ ಮೇಲಿನ ಮಾರ್ಗಸೂಚಿಯನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಿದೆ. ಈ ಸುತ್ತೋಲೆಯನ್ನು ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ ರವರಿಂದ ಅನುಮೋದಿಸಲ್ಪಟ್ಟಿರುತ್ತದೆ.




ಚೆನ್ನೈನಲ್ಲಿ ನಡೆದ ಪ್ಯಾರಾ ಒಲಿಂಪಿಕ್ಸ್ ನಲ್ಲಿ ತುಮಕೂರಿನ ನಿವೇದಿತ ರವರು ಚಿನ್ನದ ಪದಕ ಪಡೆದಿದ್ದಾರೆ. ಇತ್ತೀಚೆಗೆ ಚೆನ್ನೈನಲ್ಲಿ ನಡೆದ 23ನೇ ರಾಷ್ಟ್ರೀಯ ಪ್ಯಾರ ಒಲಿಂಪಿಕ್ಸ್ ನಲ್ಲಿ ತುಮಕೂರು ಮಹಾನಗರ ಪಾಲಿಕೆ ನಗರ ಪುನರ್ವಸತಿ ಕಾರ್ಯಕರ್ತರಾದ ಶ್ರೀಮತಿ ನಿವೇದಿತವರವರು ಗುಂಡು ಎಸೆತ ಸ್ಪರ್ದೆಯಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದು ಚಿನ್ನದ ಪದಕ ಪಡೆದು ತುಮಕೂರು ಜಿಲ್ಲೆಗೆ ಕೀರ್ತಿಯನ್ನು ತಂದಿದ್ದಾರೆ. ಶ್ರೀಮತಿನಿವೇದಿತ ರವರಿಗೆ ತುಮಕೂರು ಪರಿಶ್ರಮ ದಿವ್ಯಾಂಗ್ ಸ್ಪೋರ್ಟ್ ಅಕಾಡೆಮಿ ವತಿಯಿಂದ ತುಂಬು ಹೃದಯದ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

# ಬೆಸ್ಕಾಂ ಇಲಾಖೆಯ ವಿರುದ್ದ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ

ತಿಪಟೂರು: ತಾಲ್ಲೂಕಿನ ಕಳೆದ 20 ದಿನಗಳಿಂದಲೂ ತೋಟದ ಮನೆಗಳಿಗೆ ಸಂಜೆ 6 ಗಂಟೆಯಿಂದ ಬೆಳಿಗ್ಗೆ 6 ಗಂಟೆಯವರೆಗೆಗೂ ವಿದ್ಯುತ್ ಸಮರ್ಪಕವಾಗಿ ನೀಡದ ಕಾರಣ ಫೆ 24 ಸೋಮವಾರ ಬೆಳಗ್ಗೆ 11.00 ಗಂಟೆಗೆ ಬೆಸ್ಕಾಂ ಕಚೇರಿ ಮುಂಭಾಗದಲ್ಲಿ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹವನ್ನು ಹಮ್ಮಿಕೊಳ್ಳಲಾಗುವುದು ಎಂದು ತೋಟದ ಮನೆಗಳ ಹಿತ ರಕ್ಷಣಾ ಸಮಿತಿ ಸಂಚಾಲಕ ವಿನಯ್ ಮಡೇನೂರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅಸಮರ್ಪಕ ವಿದ್ಯುತ್ ಸರಬರಾಜಿನಿಂದ ತೋಟದ ಮನೆಗಳ ಹತ್ತಿರ ಮೋಟರ್ ಪಂಪ್‌ಸೆಟ್, ಕೇಬಲ್ ಕಳ್ಳತನ ಮತ್ತು ಚಿರತೆ ಕಾಟ ಹೆಚ್ಚಾಗಿದ್ದು ಭಯದ ವಾತಾವರಣದಲ್ಲಿ ಬದುಕುವ ಪರಿಸ್ಥಿತಿ ನಿರ್ಮಾಣವಾಗಿದೆ. ಇಂತಹ ಪರಿಸ್ಥಿತಿ ಯಾವ ಶತ್ರುವಿಗೂ ಬರಬಾರದು ಆದ್ದರಿಂದ ಸೋಮವಾರ ಬೆಳಗ್ಗೆ 11 ಗಂಟೆಗೆ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ಕರೆಯಲಾಗಿದೆ, ಎಲ್ಲಾ ರೈತ ಮಿತ್ರರು ತಿಪಟೂರು ಬೆಸ್ಕಾಂ ಕಚೇರಿ ಮುಂಭಾಗಕ್ಕೆ ಆಗಮಿಸಿ ಅಧಿಕಾರಿ ಗಳಿಂದ ನ್ಯಾಯಯುತವಾದ ವಿದ್ಯುತ್ ಕೇಳಬೇಕಾಗಿದೆ. ನಮ್ಮ ವಿದ್ಯುತ್ ನಮ್ಮ ಹಕ್ಕು ಕಳೆದ ಎರಡು ದಿನಗಳಿಂದ ಮೂಗಿಗೆ ತುಪ್ಪ ಸವರುವ ಹಾಗೆ ಅಲ್ಪಸ್ವಲ್ಪ ಕರೆಂಟ್ ಕೊಡುತ್ತಿದ್ದಾರೆ, ಮೊದಲಿನ ಹಾಗೆ ಸಮರ್ಪಕವಾಗಿ ವಿದ್ಯುತ್ ಕೊಡುವವರೆಗೂ ನಮ್ಮ ಹೋರಾಟ ನಡೆಯಲಿದೆ ಎಂದಿದ್ದಾರೆ.

# ಶಿಕ್ಷಣ ಇಲಾಖಾ ನೌಕರರ ಸಹಕಾರ ಸಂಘಕ್ಕೆ ಪದಾಧಿಕಾರಿಗಳ ಆಯ್ಕೆ



ಚಿಕ್ಕನಾಯಕನಹಳ್ಳಿ : ಶಿಕ್ಷಣ ಇಲಾಖಾ ನೌಕರರ ಸಹಕಾರ ಸಂಘಕ್ಕೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಕೆ.ಶಿವಕುಮಾರ್ ಉಪಾಧ್ಯಕ್ಷರಾಗಿ ಎನ್.ರಾಮಚಂದ್ರಯ್ಯ ಹಾಗೂ ಟಿ.ಬಿ.ಶೋಭ ಆಯ್ಕೆಯಾದರು.

17 ನಿರ್ದೇಶಕ ಸ್ಥಾನಕ್ಕೆ ಭಾನುವಾರ ಚುನಾವಣೆ ನಡೆದಿದ್ದು ಆಯ್ಕೆಯಾದ ಸದಸ್ಯರಲ್ಲಿ ಕಾರ್ಯದರ್ಶಿಯಾಗಿ ಸಿ.ಎಂ.ದಿನಕರ, ಖಜಾಂಚಿಯಾಗಿ ಜಿ.ಪಿ.ಸ್ವಾಮಿ, ಆಂತರಿಕ ಲೆಕ್ಕ ಪರಿಶೋಧನೆಯಲ್ಲಿ ಬಿ.ಎನ್.ರೇವಣ್ಣ ನೇಮಕವಾಗಿದ್ದಾರೆ.

ಚುನಾಯಿತರಾದ ಶಿಕ್ಷಣ ಇಲಾಖಾ ನೌಕರರ ಸಹಕಾರ ಸಂಘದ ನಿರ್ದೇಶಕರುಗಳು : ಶಿವಕುಮಾರ್ ಕೆ, ದಿನಕರ ಸಿ.ಎಂ, ರೇವಣ್ಣ ಬಿ.ಎನ್, ಅಂದಾನಪ್ಪ ಆರ್, ಸ್ವಾಮಿ ಬಿ.ಪಿ, ಮೋಹನ್ ಕುಮಾರ್ ಹೆಚ್.ಎಸ್, ಬೀರಯ್ಯ ಎನ್, ಶಶಿಧರ ಬಿ.ಎನ್, ಶಬ್ಬೀರ್ ಪಾಷ, ರಾಮಚಂದ್ರಯ್ಯ ಬಿ.ಕೆ, ಶ್ರೀನಿವಾಸರಾಜು ಸಿ.ಆರ್, ಶೋಭ ಟಿ.ಬಿ, ಕೋದಂಡರಾಮಯ್ಯ ಸಿ.ಟಿ, ಮಂಜುನಾಥ ಬಿ, ರಾಮಚಂದ್ರಯ್ಯ ಎನ್, ಕುಮಾರ ಡಿ ಆಯ್ಕೆಯಾದರು.

# 'ಬಿ-ಖಾತೆ: ಆಸ್ತಿ ಮಾಲೀಕರ ಗೊಂದಲ ನಿವಾರಿಸಿ'



ತುಮಕೂರು: ರಾಜ್ಯ ಸರ್ಕಾರದ ಸೂಚನೆಯಂತೆ ಆಸ್ತಿಯ ಮಾಲಿಕತ್ವವನ್ನು ಅಧಿಕೃತಗೊಳಿಸಿಕೊಳ್ಳಲು ನಗರದಲ್ಲಿಯೂ ನಗರಪಾಲಿಕೆ ಬಿ–ಖಾತಾ ಆಂದೋಲನ ಹಮ್ಮಿಕೊಂಡಿರುವುದು ಸ್ವಾಗತಾರ್ಹ. ಆದರೆ, ಬಿ–ಖಾತೆ ಸಂಬಂಧ ಸಾರ್ವಜನಿಕರಲ್ಲಿ ಇರುವ ಗೊಂದಲ, ಸಂದೇಹವನ್ನು ಶಾಸಕರು ಹಾಗೂ ನಗರಪಾಲಿಕೆ ಅಧಿಕಾರಿಗಳು ನಿವಾರಣೆ ಮಾಡಬೇಕು ಎಂದು ನಗರಸಭೆ ಮಾಜಿ ವಿಪಕ್ಷ ನಾಯಕ ಟಿ.ಜಿ.ನರಸಿಂಹರಾಜು ಮನವಿ ಮಾಡಿದ್ದಾರೆ.

ನಮ್ಮ ಆಸ್ತಿಯನ್ನು ಬಿ–ಖಾತೆ ಮಾಡಿಸಲು ಈ ಬಾರಿ ಎರಡರಷ್ಟು ತೆರಿಗೆ ಹಣ ಪಾವತಿಸಬೇಕು ಎಂದು ಅಧಿಕಾರಿಗಳು ಹೇಳಿದ್ದಾರೆ. ಇದರಲ್ಲಿ ಚದುರ ಅಡಿಗೆ ಪಾವತಿಸಬೇಕಾದ ತೆರಿಗೆ ಹಣ ಎಷ್ಟು? ನಗರದ ಎಲ್ಲಾ ಪ್ರದೇಶಗಳ ನಿವೇಶನ, ಕಟ್ಟಡಗಳಿಗೂ ಸಮಾನ ತೆರಿಗೆ ಇರುತ್ತದೆಯೆ? ಬಿ–ಖಾತೆಯ ನಿವೇಶನ, ಕಟ್ಟಡವನ್ನು ಮಾರಾಟ ಮಾಡು, ಖರೀದಿ ಮಾಡುವಂತಹ ಪರಭಾರೆ ಸಂದರ್ಭದಲ್ಲಿ ಸಬ್‌ರಿಜಿಸ್ಟ್ರಾರ್ ಕಚೇರಿಯಲ್ಲಿ ಆಸ್ತಿ ನೋಂದಣಿಗೆ ಬಿ–ಖಾತೆಗೆ ಮಾನ್ಯತೆ ಇದೆಯೆ? ನಗರ ಪಾಲಿಕೆಯಿಂದ ಕಟ್ಟಡ ನಿರ್ಮಾಣಕ್ಕೆ ನಕ್ಷೆ ಅನುಮೋದನೆ ಹಾಗೂ ಯುಜಿಡಿ, ಕುಡಿಯುವ ನೀರು, ವಿದ್ಯುತ್ ಸಂಪರ್ಕ, ಮತ್ತಿತರ ನಾಗರೀಕ ಸೌಕರ್ಯ ಪಡೆಯಲು ಬಿ–ಖಾತೆ ಅನ್ವಯವಾಗುವುದೆ? ಎಂದು ಕೇಳಿದ್ದಾರೆ.

ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಕಟ್ಟಡ ನಿರ್ಮಾಣ ಹಾಗೂ ಆಸ್ತಿ ಮೇಲಿನ ಸಾಲಸೌಲಭ್ಯ ಪಡೆಯಲು ಬಿ–ಖಾತೆ ಅನ್ವಯವಾಗುವುದೆ? ಆಸ್ತಿ ಪರಭಾರೆ ನಂತರ ಆಸ್ತಿಯ ಅದೇ ಖಾತೆ ನಂಬರ್ ಖರೀದಿದಾರರ ಹೆಸರಿಗೆ ವರ್ಗಾವಣೆ ಆಗುವುದೆ ಅಥವಾ ಬದಲಾಗುವುದೆ? ನಗರ ಪಾಲಿಕೆಗೆ ಹೊಸದಾಗಿ ಸೇರ್ಪಡೆಯಾಗಿರುವ ನಗರದ ಹೊರವಲಯದ 23 ಹಳ್ಳಿಗಳ ರೆವಿನ್ಯೂ ನಿವೇಶನ, ಕಟ್ಟಡಗಳನ್ನು ಬಿ–ಖಾತೆ ಮಾಡಿಸಬಹುದೆ? ಇದಕ್ಕೆ ಪ್ರತ್ಯೇಕ ನಿಯಮಾವಳಿಗಳು, ತೆರಿಗೆ ಹಣ ಪ್ರಮಾಣದಲ್ಲಿ ವ್ಯತ್ಯಾಸವಿರುವುದೆ? ಎಂಬುದನ್ನು ಅಧಿಕಾರಿಗಳು ಸ್ಪಷ್ಟಪಡಿಸಬೇಕು ಎಂದು ಕೋರಿದ್ದಾರೆ.

ಹಿಂದೆ ನಗರಸಭೆ ಅಸ್ತಿತ್ವದಲ್ಲಿದ್ದ ಕಾಲದಲ್ಲಿನ ಸಾವಿರಾರು 'ಅನ್ ಅಸೆಸ್‌ಡ್' ಖಾತೆಗಳಿದ್ದು, ಇವುಗಳಿಗೂ ಬಿ–ಖಾತೆ ಅನ್ವಯವಾಗುತ್ತದೆಯೆ? ನಗರಸಭೆ ಆಡಳಿತ ಕಾಲದಲ್ಲಿ 30 ಸಾವಿರ ರೂ.ವರೆಗೂ ಅಭಿವೃದ್ಧಿ ಶುಲ್ಕ ಪಾವತಿಸಲಾಗಿದೆ. ಆ ಹಣದ ಪರಿಸ್ಥಿತಿ ಏನು? ಬಿ–ಖಾತೆಗೆ ಮತ್ತೆ ಹಣ ಪಾವತಿಸಬೇಕೆ? ಪಾವತಿಸಬೇಕೆಂದರೆ ಆಗ ಕಟ್ಟಿದ ಹಣ ಪರಿಸ್ಥಿತಿ ಏನು? ಮೂರು ತಿಂಗಳ ಒಳಗಾಗಿ ಬಿ–ಖಾತೆ ಮಾಡಿಸಿಕೊಳ್ಳಬೇಕು ಎಂದು ಸೂಚನೆ ನೀಡಲಾಗಿದೆ. ಈ ವಿಚಾರದಲ್ಲಿ ಗಡವು ನೀಡುವುದು ಬೇಡ, ಬಿ–ಖಾತೆ ನೋಂದಣಿಗೆ ತೆರಿಗೆ ಪಾವತಿ ಮಾಡಬೇಕಾಗಿರುವುದರಿಂದ ಆಸ್ತಿ ಮಾಲೀಕರು ತಮಗೆ ಅನುಕೂಲ ಪರಿಸ್ಥಿತಿಯಲ್ಲಿ ನೋಂದಣಿ ಮಾಡಿಸಲು ಕಾಲಾವಕಾಶ ನೀಡಬೇಕು. ಈ ಎಲ್ಲಾ ಗೊಂದಲಗಳಿಗೆ ನಗರಪಾಲಿಕೆಯವರು ಸಾರ್ವಜನಿಕರಿಗೆ ಸಮರ್ಪಕ ವಿವರ ನೀಡಬೇಕು ಎಂದು ಟಿ.ಜಿ.ನರಸಿಂಹರಾಜು ಮನವಿ ಮಾಡಿದ್ದಾರೆ.

# ಉಚಿತ ಬ್ಯೂಟಿ ಪಾರ್ಲರ್ ತರಬೇತಿ

ತುಮಕೂರು: ರುಡ್‌ಸೆಟ್ ಸಂಸ್ಥೆಯ ವತಿಯಿಂದ ಬ್ಯೂಟಿ ಪಾರ್ಲರ್ ಕುರಿತ 30 ದಿನಗಳ ಉಚಿತ ತರಬೇತಿ ನೀಡಲು ಗ್ರಾಮೀಣ ನಿರುದ್ಯೋಗಿ ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದೆ.


ತರಬೇತಿಯು ಮಾರ್ಚ್ 4 ರಿಂದ ಪ್ರಾರಂಭವಾಗಲಿದ್ದು, ಅಭ್ಯರ್ಥಿಗಳು 18 ರಿಂದ 45 ವ?ರ್ ವಯೋಮಾನದ ಕನ್ನಡ ಭಾ? ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್/ ಜಾಬ್ ಕಾರ್ಡ್/ಆಧಾರ್ ಕಾರ್ಡನ್ನು ಕಡ್ಡಾಯವಾಗಿ ಹೊಂದಿರುವ ಗ್ರಾಮೀಣ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿ ಅವಧಿಯಲ್ಲಿ ಉಚಿತ ಊಟ ಒದಗಿಸಲಾಗು ವುದು. ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರ ವಿತರಿಸಲಾಗುವುದು. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಮೊಬೈಲ್ ಸಂಖ್ಯೆ: 9380162042, 9241482541, 9740982585, 9113880324ನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಧುಗಿರಿ : ಇಂದು ವಿದ್ಯುತ್ ವ್ಯತ್ಯಯ

ತುಮಕೂರು : ಬೆವಿಕಂ ಮಧುಗಿರಿ ತಾಲ್ಲೂಕು ಮಧುಗಿರಿ ಉಪವಿಭಾಗ ವ್ಯಾಪ್ತಿಯಲ್ಲಿ ತ್ರೈಮಾಸಿಕ ನಿರ್ವಹಣೆ ಕಾರ್ಯ ಕೈಗೊಂಡಿರುವ ಹಿನ್ನೆಲೆಯಲ್ಲಿ ಫೆಬ್ರವರಿ 22ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ಮಧುಗಿರಿ ಪಟ್ಟಣ, ಮಧುಗಿರಿ ತಾಲ್ಲೂಕಿನ ಕಸಬಾ, ದೊಡ್ಡೇರಿ, ಬಡವನಹಳ್ಳಿ, ಮಿಡಿಗೇಶಿ, ಐ.ಡಿ.ಹಳ್ಳಿ ಹೋಬಳಿ ವ್ಯಾಪ್ತಿಯ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಮನವಿ ಮಾಡಿದ್ದಾರೆ.

## ಮಧ್ಯವರ್ತಿಗಳಿಗೆ ಯಾವುದೇ ಅವಕಾಶವಿಲ್ಲ : ಐದು ಕಡೆ ಅರ್ಜಿ ಸ್ವೀಕಾರ

# ತಿಪಟೂರು ನಗರಸಭೆಯಿಂದ ಇ–ಖಾತಾ ಅಭಿಯಾನ



ತಿಪಟೂರು : ಬಹಳ ವರ್ಷಗಳ ಬೇಡಿಕೆಯಾಗಿದ್ದ, ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದನ್ನು ಗಮನಿಸಿ ಜನರಿಗೆ ನಗರದ ಆಸ್ತಿಯ ಮಾಲೀಕರು ತನ್ನದೆ ಆಸ್ತಿಯೆಂದು ನಿಖರವಾಗಿ ಗುರುತಿಸಿಕೊಂಡು ಅದಕ್ಕೆ ದಾಖಾಲಾತಿಗಳನ್ನು ಸಲ್ಲಿಸಿ ಸರ್ಕಾರದಿಂದ ಅಧಿಕೃತ ದಾಖಾಲಾತಿ ಪಡೆದುಕೊಳ್ಳುವ ಡಿಜಿಟಲ್ ಪ್ರಮಾಣ ಪತ್ರವನ್ನು (ಇ–ಖಾತಾ) ನೀಡಲಾಗುವುದೆಂದು ಶಾಸಕ ಕೆ.ಷಡಕ್ಷರಿ ನಗರಸಭೆಯ ಶಾಸಕರ ಕಚೇರಿಯಲ್ಲಿ ತಿಳಿಸಿದರು.

ನಗರದ ಜನರಿಗೆ ತಮ್ಮ ಆಸ್ತಿಯ ಮೇಲೆ ಇ–ಖಾತಾ ಪಡೆಯಲು ಅನುಕೂಲವಾಗಲೆಂದು ಸರ್ಕಾರದಿಂದ ಎ ಖಾತಾ ಹಾಗೂ ಬಿ ಖಾತಾ ನೀಡಲಾಗುತ್ತಿದ್ದು ಮುಂದಿನ ಮೂರು ತಿಂಗಳವರೆಗೆ ಅವಕಾಶ ಮಾಡಲಾಗಿದೆ. ಇಲ್ಲಿ ಯಾವುದೇ ಮಧ್ಯವರ್ತಿಗಳಿಗೆ ಅವಕಾಶವಿರುವುದಿಲ್ಲ ಅಂತಹ ಘಟನೆಗಳು ಕಂಡು ಬಂದಲ್ಲಿ ಕ್ರಮ ತೆಗೆದುಕೊಳ್ಳಲಾಗುವುದು. ಸಾರ್ವಜನಿಕರ ಅನುಕೂಲಕ್ಕಾಗಿ ನಗರಸಭೆಯ ಹಳೇ ಕಚೇರಿ, ಗಾಂಧಿನಗರದ ಪಾರ್ಕ್ ಬಳಿ, ಶಾರದನಗರ ಬೈಫ್ ಕಚೇರಿ, ಹೌಸಿಂಗ್ ಬೋರ್ಡ್ ಕಾಲೋನಿ, ಹಳೇಪಾಳ್ಯದ ರಾಮಮಂದಿರದಲ್ಲಿ ಪ್ರತ್ಯೇಕವಾಗಿ ಐದು ಕಡೆಯಲ್ಲಿ ಇ–ಖಾತಾ ಅರ್ಜಿ ಸ್ವೀಕರಿಸಲು ಕೇಂದ್ರಗಳನ್ನು ತೆರಯಲಾಗಿದೆ. ಹಾಗೂ ಸಾರ್ವಜನಿಕರು ಆನ್‌ಲೈನ್‌ಲ್ಲೂ ಅರ್ಜಿ ಸಲ್ಲಿಸಲು ಅವಕಾಶವಿದೆ ಎಂದರು.

ಇ ಆಸ್ತಿ ತಂತ್ರಾಶವನ್ನು 2016 ರಿಂದ ಜಾರಿಗೊಳಿಸಿ ಒಂಬತ್ತು ವರ್ಷಗಳಲ್ಲಿ 14 ಸಾವಿರ ಇ–ಖಾತಾಗಳನ್ನು ಮಾಡಲಾಗಿದ್ದು ಉಳಿದ ಎಲ್ಲಾ ಆಸ್ತಿ ಮಾಲೀಕರು ನಿವೇಶನ ಹಾಗೂ ಕಟ್ಟಡಗಳಿಗೆ ಮೇ 10 ರ ಒಳಗಾಗಿ ಇ–ಖಾತೆಗಳನ್ನು ಮಾಡಿಸಿಕೊಳ್ಳಬಹುದು ಎಂದರು.

ನಗರಸಭೆ ಅಧ್ಯಕ್ಷೆ ಯಮುನಾ ಧರಣೇಶ್, ಪೌರಯುಕ್ತ ವಿಶ್ವೇಶ್ವರ ಬದರಗಡೆ ಮಾತನಾಡಿದರು ನಗರಸಭಾ ಕಚೇರಿಯಲ್ಲಿ ಪ್ರಯೋಗಿಕವಾಗಿ ಶಾಸಕ ಕೆ.ಷಡಕ್ಷರಿ ನಗರವಾಸಿಗಳಿಗೆ ಇ ಖಾತಾ ಪತ್ರವನ್ನು ವಿತರಣೆ ಮಾಡಿದರು. ಸಂದರ್ಭದಲ್ಲಿ ಅಧ್ಯಕ್ಷೆ ಯಮುನಾಧರಣೇಶ್, ಪೌರಯುಕ್ತ ವಿಶ್ವೇಶ್ವರ ಬದರಗಡೆ ಉಪಸ್ಥಿತರಿದ್ದರು.

**Printed by:** H.S.PARAMESH, SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101
**Published by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **owned by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **Printed at** SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101 **and published at** TUMAKURU. BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132
**Editor:** RADHIKA A.R. "**KARNATAKA SUCCESS NO 1**" KANNADA Daily News Paper